ಕರ್ನಾಟಕ ಸರ್ಕಾರ

ಸಾರ್ವಜನಿಕ ಶಿಕ್ಷಣ ಇಲಾಖೆ

**ಆಯುಕ್ತರ ಕಛೇರಿ, ಹೊಸ ಸಾರ್ವಜನಿಕ ಕಛೇರಿಗಳು, ನೃಪತುಂಗ ರಸ್ತೆ, ಕೆ.ಆರ್.ವೃತ್ತ, ಬೆಂಗಳೂರು -1**

ಸಂಖ್ಯೆ: ಸಿ8[1]ಶಾಶಿಅ ಸುತ್ತೋಲೆ 141/2018-19

ದಿನಾಂಕ: 23-07-2019

**-: ಜ್ಞಾಪನ :-**

**ವಿಷಯ:**-ರಾಜ್ಯದಲ್ಲಿನ ಅನುದಾನಿತ ಪ್ರೌಢಶಾಲೆಗಳಲ್ಲಿ ಖಾಲಿ ಹುದ್ದೆಗಳನ್ನು ಭರ್ತಿ ಮಾಡಲು ಈ ಕಚೇರಿಯಿಂದ ಅನುಮತಿ ಪಡೆದ ನೇಮಕಾತಿ ಪ್ರಕ್ರಿಯೆಯನ್ನು ಮುಗಿಸಿ ಜಿಲ್ಲಾ ತ್ರಿ ಸದಸ್ಯ ಸಮಿತಿಯಿಂದ ಅನುಮೋದನೆಗೊಂಡಿರುವ ಪ್ರಸ್ತಾವನೆಗಳನ್ನು ಈ ಕಚೇರಿಗೆ ಸಲ್ಲಿಸುವ ಬಗ್ಗೆ.

**ಉಲ್ಲೇಖ:** 1. ಸಂಖ್ಯೆ: ಸಿ8[1ಶಾಶಿಅ ಪ್ರೌಶಾಶಿಸುತ್ತೋಲೆ 141/1/2018-19 ದಿನಾಂಕ: 30.04.2019

2 .ಮಾನ್ಯ ಆಯುಕ್ತರ ಟಿಪ್ಪಣಿ ದಿನಾಂಕ: 15-07-2019

*****

ಅನುದಾನಿತ ಪ್ರೌಢಶಾಲೆಗಳಲ್ಲಿ ಶಿಕ್ಷಕರ ನೇಮಕಾತಿ ಅನುಮೋದನೆ ಪ್ರಕರಣಗಳಿಗೆ ಸಂಬಂಧಿಸಿದಂತೆ ಈಗಾಗಲೇ ಜಿಲ್ಲಾ ಹಂತದಲ್ಲಿ ಪ್ರಸ್ತಾವನೆಗಳು ಸ್ವೀಕೃತವಾಗಿದ್ದು, ಸಂಬಂಧಪಟ್ಟ ಜಿಲ್ಲಾ ಪಂಚಾಯತ್ ತ್ರಿ-ಸದಸ್ಯ ಸಮಿತಿಯ ಶಿಫಾರಸ್ಸು ಮಾಡಿ ಉಪನಿರ್ದೇಶಕರ ಕಚೇರಿಗಳಲ್ಲಿ ಬಾಕಿ ಇರುವ ಪ್ರಕರಣಗಳನ್ನು ಮಾತ್ರ ನಿಯಮಾನುಸಾರ ಪರಿಶೀಲಿಸಿ ದಿನಾಂಕ: 08-05-2019 ರೊಳಗೆ ಈ ಕಚೇರಿಗೆ ಸಲ್ಲಿಸುವಂತೆ ಉಲ್ಲೇಖ(1) ಜ್ಞಾಪನದಲ್ಲಿ ತಿಳಿಸಲಾಗಿತ್ತು.

ಉಲ್ಲೇಖ(2)ರ ಮಾನ್ಯ ಆಯುಕ್ತರ ಸೂಚನೆಯಂತೆ ಅನುದಾನಿತ ಪ್ರೌಢಶಾಲೆಗಳಲ್ಲಿ ಖಾಲಿ ಇರುವ ಬೋಧಕ ಹುದ್ದೆಗಳಿಗೆ ನೇಮಕಾತಿ ಮಾಡಿಕೊಳ್ಳಲು ಈಗಾಗಲೇ ಇಲಾಖೆಯಿಂದ ಅನುಮತಿ ಪಡೆದಿದ್ದು, ಅದರಂತೆ ಆಡಳಿತ ಮಂಡಳಿಯವರು ಪತ್ರಿಕಾ ಪ್ರಕಟಣೆ ಹೊರಡಿಸಿ, ನಿಯಮಾನುಸಾರ ಸಂದರ್ಶನ ನಡೆಸಿ, ದಿನಾಂಕ: 30-04-2019 ರ ಒಳಗೆ ಆಯ್ಕೆ ಪ್ರಕ್ರಿಯೆ ಮುಗಿಸಿ ಬಾಕಿ ಇರುವಂತಹ ಪ್ರಸ್ತಾವನೆಗಳನ್ನು ಕೂಡಲೇ ಈ ಕಚೇರಿಗೆ ಸಲ್ಲಿಸಲು ತಿಳಿಸಿದೆ.

**ಈ** ಹಂತವನ್ನು ಹೊರತುಪಡಿಸಿ ಈಗಾಗಲೇ ತಿಳಿಸಿರುವಂತೆ ಖಾಲಿ ಹುದ್ದೆ ಅನುಮತಿ ಮತ್ತು ಅನುದಾನ ಸಹಿತ ಅನುಮೋದಿಸುವ ಪ್ರಸ್ತಾವನೆಗಳನ್ನು ಕಡ್ಡಾಯವಾಗಿ ಆನ್-ಲೈನ್ ಮುಖಾಂತರವೇ ಸಲ್ಲಿಸಲು ಅಗತ್ಯ ಕ್ರಮ ವಹಿಸಲು ತಿಳಿಸಿದೆ.

**(ಮಾನ್ಯ ಆಯುಕ್ತರ ಆದೇಶದ ಮೇರೆಗೆ )**

**ನಿರ್ದೇಶಕರು (ಪ್ರೌಢ ಶಿಕ್ಷಣ)**
**ಸಾರ್ವಜನಿಕ ಶಿಕ್ಷಣ ಇಲಾಖೆ**
**ಬೆಂಗಳೂರು**

**ಪ್ರತಿಯನ್ನು:-**

1. ಬೆಂಗಳೂರು-ಮೈಸೂರು ವಿಭಾಗದ ಎಲ್ಲಾ ಜಿಲ್ಲಾ ಉಪನಿರ್ದೇಶಕರು (ಆಡಳಿತ) ಇವರಿಗೆ ಸೂಕ್ತ ಕ್ರಮಕ್ಕಾಗಿ ಹಾಗೂ ತಮ್ಮ ಅಧೀನದಲ್ಲಿ ಬರುವ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ/ಆಡಳಿತ ಮಂಡಳಿಗೆ ಸೂಚನೆ ನೀಡಿ ನಿಗಧಿತ ಸಮಯದಲ್ಲಿ ಪ್ರಸ್ತಾವನೆ ಸಲ್ಲಿಸಲು ಕ್ರಮ ಕೈಗೊಳ್ಳಲು ತಿಳಿಸಿದೆ,
2. ಮಾನ್ಯ ಆಯುಕ್ತರ ಆಪ್ತ ಶಾಖೆಗೆ
3. ಕಛೇರಿ ಪ್ರತಿ.